All India Radio: Bangalore
Regional Bulletin In Kannada
19.11.2025 / 14.30 p.m.

ಮುಖ್ಯಾಂಶಗಳು

- ಕಿಸಾನ್ ಸಮ್ಮಾನ್ ನಿಧಿಯ ೨೧ನೇ ಕಂತು ಬಿಡುಗಡೆ ಮಾಡಿದ ಪ್ರಧಾನಿ ನರೇಂದ್ರ ಮೋದಿ
- ಶಬರಿಮಲೆ ಯಾತ್ರಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಸಚಿವ ದಿನೇಶ್ ಗುಂಡೂರಾವ್ ಮನವಿ
- ಬೆಂಗಳೂರು ತಂತ್ರಜ್ಞಾನ ಶೃಂಗಸಭೆ ಹಿನ್ನೆಲೆ ; ಅಮೆರಿಕ ಕಾನ್ಸುಲ್ ಜನರಲ್ ಕ್ರಿಸ್ ಹಾಡ್ಜಸ್ ಜೊತೆ ಸಚಿವ ಎಂ.ಬಿ. ಪಾಟೀಲ್ ಚರ್ಚೆ
- ಕೇಂದ್ರ ಕಾರಾಗೃಹದಲ್ಲಿ ಐಷಾರಾಮಿ ಸೌಲಭ್ಯ ; ವಾಟ್ಸಾಪ್ ಖಾತೆಗಳ ವಿವರ ಕೋರಿ ಮೆಟಾಗೆ ರಾಜ್ಯ ಪೊಲೀಸರಿಂದ ಪತ್ರ
- ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆ ; ದಾವಣಗೆರೆಯಲ್ಲಿ ರಾಜ್ಯ ಚುನಾವಣಾ ಆಯುಕ್ತರಿಂದ ಸಿದ್ಧತೆ ಪರಿಶೀಲ

<><><><>

ಪ್ರಧಾನಿ ನರೇಂದ್ರ ಮೋದಿ ಕೋಯಂಬತ್ತೂರಿನಲ್ಲಿ ಕಿಸಾನ್ ಸಮ್ಮಾನ್ ನಿಧಿಯ ೨೧ನೇ ಕಂತನ್ನು ಬಿಡುಗಡೆ ಮಾಡಿದ್ದಾರೆ. ದಕ್ಷಿಣ ಭಾರತ ನೈಸರ್ಗಿಕ ಕೃಷಿ ಶೃಂಗಸ ಭೆ ಉದ್ಘಾಟಿಸಿದ ಅವರು, ರೈತರೊಂದಿಗೆ ಸಂವಾದ ನಡೆಸಿದರು. ಸುಮಾರು ೯ ಕೋಟಿ ರೈತರು ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ. ೧೮ ಸಾವಿರದ ೯ ಕೋಟಿ ರೂಪಾಯಿ ವೆಚ್ಚದ ಪಿಎಂ ಕಿಸಾನ್‌ನ ೨೧ನೇ ಕಂತು ಇದಾಗಿದೆ. ಇದೇ ವೇಳೆ ಮಾತನಾಡಿದ ಪ್ರಧಾನಿ ಮೋದಿ ಕೋಯಂಬತ್ತೂರು ಕಲೆಯ ಭೂಮಿಯಾಗಿದೆ ಎಂದರು. ಇದುವರೆಗೆ ರೈತರಿಗೆ ೪ ಲಕ್ಷ ಕೋಟಿ ರೂಪಾಯಿ ನೇರ ನಗದು ಜಮೆಯಾಗಿದೆ ಎಂದು ಹೇಳಿದ್ದಾರೆ. ರಾಸಾಯನಿಕ ಯುಕ್ತ ಗೊಬ್ಬರ ಹಾಗೂ ಕೀಟನಾಶಕಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗಲಿದೆ ಎಂದು ರೈತರಿಗೆ

ಕಿವಿಮಾತು ಹೇಳಿದ್ದಾರೆ. ನೈಸರ್ಗಿಕ ಕೃಷಿಯ ಜೊತೆಗೆ ಸಿರಿಧಾನದಯಗಳನ್ನು ಬೆಳೆಯಲು ಹೆಚ್ಚಿನ ಗಮನ ನೀಡುವಂತೆ ಕರೆ ನೀಡಿದ್ದಾರೆ.

<><><>

ಶಬರಿಮಲೆ ಯಾತ್ರೆಗೆ ತೆರಳುವ ಕನ್ನಡಿಗರು ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮನವಿ ಮಾಡಿದ್ದಾರೆ. ಕಲುಷಿತ ನೀರು ಹಾಗೂ ನಿಂತ ನೀರಿನಿಂದ ಮೆದುಳು ತಿನ್ನುವ ಅಮಿಬಾ ಸೋಂಕು ಹರಡುವುದರಿಂದ ಎಚ್ಚರಿಕೆ ವಹಿಸುವಂತೆ ಸೂಚಿಸಿದ್ದಾರೆ. ನಿಂತ ನೀರಿನಲ್ಲಿ ಸ್ನಾನ ಮಾಡುವವರಿಗೆ ಮೂಗನ್ನು ಬಿಗಿ ಹಿಡಿದು ಸ್ನಾನ ಮಾಡುವಂತೆ ತಿಳಿಸಿದ್ದಾರೆ. ಸ್ನಾನ ಮಾಡಿದ ೭ ದಿನಗಳಲ್ಲಿ ವಿಪರೀತ ಜ್ವರ, ತಲೆನೋವು ಬಂದರೆ ಕೂಡಲೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯುವಂತೆ ಸೂಚನೆ ನೀಡಿದ್ದಾರೆ.

<><><>

ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯಲ್ಲಿ ಭಾಗವಹಿಸಲು ಆಗಮಿಸಿದ ಅಮೆರಿಕ ಕಾನ್ಸುಲ್ ಜನರಲ್ ಕ್ರಿಸ್ ಹಾಡ್ಜಸ್ ಅವರೊಂದಿಗೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸಭೆ ನಡೆಸಿದರು. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಸಚಿವ ಎಂ.ಬಿ. ಪಾಟೀಲ್, ಅಮೆರಿಕ ಈಗ ಭಾರತದ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದ್ದು, ದ್ವಿಮುಖ ವ್ಯಾಪಾರವು ೧೩೧ ಬಿಲಿಯನ್ ಡಾಲರ್ ದಾಟಿದೆ. ಭಾರತ-ಅಮೆರಿಕ ವ್ಯಾಪಾರ ಒಪ್ಪಂದವನ್ನು ಶೀಘ್ರದಲ್ಲೇ ಅಂತಿಮಗೊಳಿಸುವುದನ್ನು ಎದುರು ನೋಡುತ್ತಿದ್ದೇವೆ ಎಂದು ತಿಳಿಸಿದ್ದಾರೆ. ಸಭೆಯಲ್ಲಿ ಏರೋಸ್ಪೇಸ್, ಸೆಮಿಕಂಡೆಕ್ಟರ್, ಡಿಜಿಟಲ್ ತಂತ್ರಜ್ಞಾನ ಕುರಿತಂತೆ ಉಭಯ ನಾಯಕರು ಚರ್ಚೆ ನಡೆಸಿದ್ದಾರೆ.

<><><>

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಸರಣಿ ಅತ್ಯಾಚಾರಿ ಹಾಗೂ ಭಯೋತ್ಪಾದಕ ಐಷಾರಾಮಿ ಸೌಲಭ್ಯಗಳನ್ನು ಪಡೆಯುತ್ತಿರುವ ವಿಡಿಯೋ ಹಂಚಿಕೊಂಡ ವಾಟ್ಸಾಪ್ ಖಾತೆಗಳ ವಿವರಗಳನ್ನು ಕೋರಿ ರಾಜ್ಯ ಪೊಲೀಸರು ಮೆಟಾಗೆ ಪತ್ರ ಬರೆದಿದ್ದಾರೆ. ಪತ್ರದೊಂದಿಗೆ ವಿಡಿಯೋಗಳನ್ನು ಲಗತ್ತಿಸಿದ್ದು, ಅಪ್‌ಲೋಡ್ ಮಾಡಿದ ಖಾತೆಗಳನ್ನು ವಿವರಗಳನ್ನು ನೀಡುವಂತೆ ಇ-ಮೇಲ್ ಮಾಡಿದ್ದಾರೆ. ವಿಡಿಯೋ ರೆಕಾರ್ಡ್ ಮಾಡಲು ಬಳಸಿದ ಮೊಬೈಲ್ ಮತ್ತು ಅವುಗಳನ್ನು ಕಳುಹಿಸಿದ ದೂರವಾಣಿ ಸಂಖ್ಯೆಗಳ ಬಗ್ಗೆ ಪೊಲೀಸರು ಮಾಹಿತಿ ಕೋರಿದ್ದಾರೆ.

<><><><>

ಇಂದು ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಜನ್ಮದಿನ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದಿರಾಗಾಂಧಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ರಾಷ್ಟ್ರೀಯ ಐಕ್ಯತಾ ಸಪ್ತಾಹದ ಪ್ರಮಾಣ ವಚನ ಬೋಧಿಸಿದರು. ಇನ್ನೊಂದೆಡೆ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರಿಂದ ಸ್ಥಾಪಿಸಲ್ಪಟ್ಟ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ೫೦ ವರ್ಷ ತುಂಬಿದ ಹಿನ್ನೆಲೆಯಲ್ಲಿ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದ್ದ ಮಂಡಳಿಯ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಸಮಾರಂಭದಲ್ಲಿ ಸಚಿವರಾದ ಈಶ್ವರ್ ಖಂಡ್ರೆ, ಚಲುವರಾಯಸ್ವಾಮಿ, ಎಂ.ಸಿ.ಸುಧಾಕರ್ ಸೇರಿದಂತೆ ಹಲವು ನಾಯಕರು ಉಪಸ್ಥಿತರಿದ್ದರು.

<><><><>

ಶೀಘ್ರವೇ ಘೋಷಣೆಯಾಗಲಿರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಸೇರಿದಂತೆ ಸ್ಥಳಿಯ ಸಂಸ್ಥೆಗಳ ಚುನಾವಣೆಗಳನ್ನು ಪಾರದರ್ಶಕವಾಗಿ ನಡೆಸುವ ಸಂಬಂಧ ರಾಜ್ಯಾದ್ಯಂತ ಸಿದ್ಧತೆಯನ್ನು ಪರಿಶೀಲನೆ ನಡೆಸಲಾಗುತ್ತಿದೆ ಎಂದು ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆ ಹರಿಹರದ ತಾಲ್ಲೂಕು ಕಚೇರಿಯ ಚುನಾವಣಾ ಶಾಖೆಗೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಥಳಿಯ ಸಂಸ್ಥೆಗಳ ಚುನಾವಣೆಗಳು ಬ್ಯಾಲೆಟ್ ಪೇಪರ್ ಮಾದರಿಯಲ್ಲಿ ನಡೆಯಲಿದೆ. ನ್ಯಾಯ ಸಮ್ಮತ ಚುನಾವಣೆಗೆ ಆಯೋಗ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಹೇಳಿದ್ದಾರೆ.

<><><><>

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆ ನಿಮಿತ್ತ ಮೈ ಭಾರತ ಕೇಂದ್ರ ಆಯೋಜಿತ ವಂದೇ ಭಾರತ್ - ಆತ್ಮನಿರ್ಭರ ಭಾರತ್ ಘೋಷವಾಕ್ಯದೊಂದಿಗೆ ಏಕತಾ ಪಾದ ಯಾತ್ರೆ ನಡಿಗೆಗೆ ಬೆಳಗಾವಿಯಲ್ಲಿ ಸಂಸದ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಚಾಲನೆ ನೀಡಿದರು.

ಧ್ವನಿ : ಜಗದೀಶ್ ಶೆಟ್ಟರ್ (೩೬ ಸೆಕೆಂಡ್‌ಗಳು)

ಬಳ್ಳಾರಿಯಲ್ಲಿ ನಡೆದ ಸರ್ದಾರ್@೧೫೦ ಏಕತಾ ನಡಿಗೆಗೆ ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಹಾಗೂ ಮೇಯರ್ ಪಿ.ಗಾದೆಪ್ಪ ಚಾಲನೆ ನೀಡಿದರು. ೧೫ಕ್ಕೂ ಹೆಚ್ಚು ಕಾಲೇಜುಗಳ ವಿದ್ಯಾರ್ಥಿಗಳು, ಯುವ ಜನತೆ, ಸಾರ್ವಜನಿಕರು ಸೇರಿ ಸಾವಿರಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು.

<><><><>

ಚಿಕ್ಕಮಗಳೂರು ಜಿಲ್ಲೆಯ ದತ್ತಪೀಠದಲ್ಲಿ ಡಿಸೆಂಬರ್ ೨ ರಿಂದ ೪ ರ ವರೆಗೆ ದತ್ತ ಜಯಂತಿ ಕಾರ್ಯಕ್ರಮ ನಡೆಯಲಿದೆ. ಡಿಸೆಂಬರ್ ೧ ರಿಂದ ೬ ರವರೆಗೆ ಈ ಭಾಗದ ಪ್ರವಾಸಿ ತಾಣಗಳಿಗೆ ಪ್ರವಾಸಿಗರ ಭೇಟಿಯನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ. ದತ್ತಜಯಂತಿಗೆ ಚಿಕ್ಕಮಗಳೂರು ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು, ವಾಹನಗಳ ಮುಖಾಂತರ ಆಗಮಿಸಲಿದ್ದು ವಾಹನ ದಟ್ಟಣೆ ಹೆಚ್ಚುವ ಕಾರಣದಿಂದ ಮುಳ್ಳಯ್ಯನಗಿರಿ, ಸೀತಾಳಯ್ಯನಗಿರಿ, ದತ್ತಪೀಠ, ಗಾಳಿಕೆರೆ ಮತ್ತು ಮಾಣಿಕ್ಯಧಾರಾ ತಾಣಗಳಿಗೆ ನಿರ್ಬಂಧ ವಿಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಪಡಿತರ ಅಕ್ಕಿ ಅಕ್ರಮವಾಗಿ ಸಾಗಣೆ ಮಾಡುತ್ತಿದ್ದ ಆರೋಪದಡಿ ಲಾರಿ ಮಾಲೀಕ ಮತ್ತು ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದ್ದು, ೩೦೧ ಕ್ವಿಂಟಲ್ ಅಕ್ಕಿ ವಶಕ್ಕೆ ಪಡೆಯಲಾಗಿದೆ.

ಕಾಳ ಸಂತೆಯಲ್ಲಿ ಪಡಿತರ ಅಕ್ಕಿ ದಾಸ್ತಾನು ಮಾಡಿದ್ದರ ಕುರಿತು ಮಾಹಿತಿ ಆಧರಿಸಿ ಪೊಲೀಸರು ದಾಳಿ ನಡೆಸಿದ್ದರು. ೧೦ ಲಕ್ಷ ೪೩ ಸಾವಿರ ರೂಪಾಯಿ ಮೌಲ್ಯದ ೩೦೧ ಕ್ವಿಂಟಲ್ ಪಡಿತರ ಅಕ್ಕಿ ಹಾಗೂ ಲಾರಿಯನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

<><><><>

ಮಹಾನಗರ ಪಾಲಿಕೆಯಲ್ಲಿ ಸಾರ್ವಜನಿಕರಿಗೆ ಇ-ಸ್ವತ್ತು ದಾಖಲೆಗಳನ್ನು ನೀಡುವಲ್ಲಿ ನಡೆಯುತ್ತಿರುವ ವಿಳಂಬ ಮತ್ತು ಅವ್ಯವಸ್ಥೆ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ, ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಪಾಲಿಕೆ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಾಲಿಕೆಯ ಆಸ್ತಿ ದಾಖಲಾತಿ ವಿಭಾಗದಲ್ಲಿ ಆನ್‌ಲೈನ್ ಮೂಲಕ ಸಲ್ಲಿಕೆಯಾದ ಹಲವು ಅರ್ಜಿಗಳು ಕಂದಾಯ ನಿರೀಕ್ಷಕರ ಹಂತದಲ್ಲೇ ದೊಡ್ಡ ಪ್ರಮಾಣದಲ್ಲಿ ಬಾಕಿ ಉಳಿಸಿರುವುದು ಪತ್ತೆಯಾಗಿದೆ. ದಾಖಲೆಗಳ

ಪರಿಶೀಲನೆಗೆ ತಿಂಗಳುಗಟ್ಟಲೆ ಕಾಯುವ ಅನಿವಾರ್ಯ ಪರಿಸ್ಥಿತಿ ಮತ್ತು ಕೆಲ ಕಡೆಗಳಲ್ಲಿ ಅಧಿಕಾರಿಗಳ ಅಸಮರ್ಪಕ ಸೇವಾ ಮನೋಭಾವ ಕಂಡು ಬಂದ ಕಾರಣ ಜಿಲ್ಲಾಧಿಕಾರಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಇದೇ ರೀತಿಯ ವರ್ತನೆ ಮುಂದುವರಿದರೆ ಸಂಬಂಧಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

<><><><>

ಬಳ್ಳಾರಿ ನಗರದ ಡಿಎಆರ್ ಪೊಲೀಸ್ ಮೈದಾನದಲ್ಲಿ ಇಂದು ಮೂರು ದಿನಗಳ ೨೦೨೫ ರ ಪೊಲೀಸ್ ವಾರ್ಷಿಕ ಕ್ರೀಡಾಕೂಟ ಆರಂಭಗೊಂಡಿದೆ. ಕ್ರೀಡಾಕೂಟಕ್ಕೆ ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ ಡಾ.ಬಸವರಾಜ್ ಕೆ.ಎನ್., ಪಾರಿವಾಳ ಹಾರಿ ಬಿಡುವ ಮೂಲಕ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಗೆಲ್ಲುವುದಕ್ಕಿಂತ ಪಾಲ್ಗೊಳ್ಳುವಿಕೆ ಮುಖ್ಯ ಎಂದು ಹೇಳಿದರು. ಕ್ರೀಡಾಪಡುಗಳು ಕ್ರೀಡಾ ಮನೋಭಾವದಿಂದ ತೀರ್ಪುಗಾರರ ನಿರ್ಣಯಕ್ಕೆ ಬದ್ಧರಾಗಿರಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ. ಮಾತನಾಡಿ, ಜನರ ನಂಬಿಕೆಗೆ ತಕ್ಕಂತೆ ನಾವು ಹಲವು ಒತ್ತಡಗಳ ಮೇಲೆ ಕಾರ್ಯನಿರ್ವಹಿಸುತ್ತಿರುತ್ತೇವೆ. ನೆಮ್ಮದಿ ಪಡೆಯಲು ಈ ಕ್ರೀಡಾಕೂಟ ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ. ಜಿಲ್ಲೆಯಿಂದ ಆರು ತಂಡಗಳ ಮೂಲಕ ೨೦೦ ಕ್ರೀಡಾಪಟುಗಳು ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>